**ಸಾಕ್ಷಿಗೆ ದಿನಾಂಕ 09.07.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಿಂದಃ

1. ನಾನು ಈ ಪ್ರಕರಣದಲ್ಲಿ, 1ನೇ ಅರ್ಜಿದಾರಳಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ನಿಲುವಿಗೆ ಸಂಬಂಧಿಸಿದಂತೆ ಈ ಕೆಳಕಂಡ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಪಿ 1 | ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿ |
| ನಿ.ಪಿ 2 | ಪ್ರಥಮ ಹೇಳಿಕೆಯ ದೃಢೀಕೃತ ಪ್ರತಿ |
| ನಿ.ಪಿ 3 | ಪ್ರಥಮ ಹೇಳಿಕೆದಾರರ ಮುಂದುವರೆದ ಹೇಳಿಕೆ |
| ನಿ.ಪಿ 4 | ಶವ ತನಿಖಾ ವರದಿಯ ದೃಢೀಕೃತ ಪ್ರತಿ |
| ನಿ.ಪಿ 5 | ಶವ ಪರೀಕ್ಷಾ ವರದಿಯ ದೃಢೀಕೃತ ಪ್ರತಿ |
| ನಿ.ಪಿ 6 | ಎಂ ವಿ ಐ ವರದಿಯ ದೃಢೀಕೃತ ಪ್ರತಿ |
| ನಿ.ಪಿ 7 | ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿ |
| ನಿ.ಪಿ 8 | ಕಲಂ 133 ರಡಿ ನೀಡಿದ ನೋಟೀಸು ದೃಢೀಕೃತ ಪ್ರತಿ |
| ನಿ.ಪಿ 9 | ಕಲಂ 133 ರಡಿ ನೀಡಿದ ನೋಟೀಸಿಗೆ ಉತ್ತರ ದೃಢೀಕೃತ ಪ್ರತಿ |
| ನಿ.ಪಿ 10 | ದೋಷಾರೋಪಣ ಪತ್ರದ ದೃಢೀಕೃತ ಪ್ರತಿ |

| | |
|---|---|
| ನಿ.ಪಿ 11 ರಿಂದ 14 | 4 ಆಧಾರ್ ಕಾರ್ಡ್‌ನ ನೋಟರಿಕೃತ ದಾಖಲೆಗಳು (ಮೂಲದಾಖಲೆಯನ್ನು ಪರಿಶೀಲಿಸಿ ಹಿಂದಿರುಗಿಸಲಾಯಿತು. |
| ನಿ.ಪಿ 15 | ಮರಣ ಪ್ರಮಾಣ ಪತ್ರ |

3. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಪ್ರಕರಣದಲ್ಲಿ ಕೋರಿರುವ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ವಾಟೀಸವಾಲುಃ 2ನೇ ಎದುರುದಾರರು ಗೈರುಹಾಜರು. ಈ ಕಾರಣದಿಂದ ವಾಟೀಸವಾಲನ್ನು ಮುಂದೂಡಲಾಯಿತು.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**